ಸಣ್ ಸುದ್ದಿ

ನನ್ನ ವಿಡಿಯೋ ತಿರುಚಿದ ವಿರುದ್ಧ ಸೈಬರ್ ಕೈಂಗೆ ದೂರುವೆ: ಇಬ್ರಾಹಿಂ

ಸುವರ್ಣಸೌಧ: ವಿಪಕ್ಷ ನಾಯಕ ಸಿದ್ದರಾಮಯ್ಯ ಅವರನ್ನು ನಾನು ಬೈದಿರುವ ಹಾಗೆ ವಿಡಿಯೋ ತಿರುಚಲಾಗಿದೆ. ಈ ಬಗ್ಗೆ ಸೈಬರ್ ಕೈಂಗೆ ದೂರು ನೀಡುವೆ ಎಂದು ವಿಧಾನ ಪರಿಷತ್ ಸದಸ್ಯ ಸಿ.ಎಂ.ಇಬ್ರಾಹಿಂ ಹೇಳಿದ್ದಾರೆ. ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಶಾಸಕಾಂಗ ಸಭೆಯಲ್ಲಿ ನನ್ನ ಸಂಭಾಷಣೆ ವಿಡಿಯೋ ನಿನ್ನೆ ವೈರಲ್ ಆಗಿತ್ತು. ವಿಪಕ್ಷ ನಾಯಕ ಸಿದ್ದರಾಮಯ್ಯ ಅವರನ್ನು ಏಕವಚನದಲ್ಲಿ ಬೈದಿರುವ ಹಾಗೆ ಆ ವಿಡಿಯೊ ತಿರುಚಲಾಗಿದೆ. ಅದೊಂದು ನೀಚ ಕೆಲಸ. ಧೈರ್ಯವಾಗಿ ನನ್ನನ್ನು ಎದುರಿಸಲು ಶಕ್ತಿ ಇಲ್ಲದವರು ಈ ಕೆಲಸ ಮಾಡಿದ್ದಾರೆ. ಯಾರು ಈ ನೀಚ ಕೆಲಸ ಮಾಡಿದ್ದಾರೋ ಗೊತ್ತಿಲ್ಲ ಎಂದರು. ಬಿಜೆಪಿ ಅಥವಾ ಸಂಘ ಪರಿವಾರದವರು ಯಾರು ಮಾಡಿದ್ದಾರೋ ಗೊತ್ತಿಲ್ಲ. ಇಂತಹ ಕೆಲಸ ಮಾಡುವುದರಲ್ಲಿ ಇಬ್ಬರೂ ನಿಸ್ಸೀಮರು. ಹಿಂಬಾಗಿಲಿನಿಂದ ಈ ರೀತಿ ಕೆಲಸ ಮಾಡಲಾಗಿದೆ. ಈ ವಿಡಿಯೋ ತಿರುಚಿರುವ ಬಗ್ಗೆ ಸೈಬರ್ ಕೈಂಗೆ ದೂರು ನೀಡಲಿದ್ದೇನೆ ಎಂದು ಇಬ್ರಾಹಿಂ ಹೇಳಿದರು. ಪರ್ಸಂಟೇಜ್ ಪಡೆಯುವ ಬಗ್ಗೆ ನೋಂದಾಯಿತ ಗುತ್ತಿಗೆದಾರರ ಸಂಘ ಆರೋಪ ಮಾಡಿದೆ. ಆರೋಪ ಸುಳ್ಳಾಗಿದ್ದರೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಗುತ್ತಿಗೆದಾರರ ವಿರುದ್ಧ ಕ್ರಮ ಕೈಗೊಳ್ಳಬೇಕು. ನಿಮ್ಮದೇ ಸರ್ಕಾರವಿದ್ದು, ಅದರ ಬಗ್ಗೆ ತನಿಖೆ ಮಾಡಿ. ಮೈದಾನವಿದ್ದು, ಧಮ್ ಇದ್ದರೆ ತನಿಖೆ ಮಾಡಿ ಎಂದರು.

ಕೊಲ್ಲೂರು ದೇಗುಲ ಮಂಡಳಿ ಅಧ್ಯಕ್ಷರ ಆಯ್ಕೆ ರದ್ದತಿಗೆ ಹೈಕೋರ್ಟ್ ತಡೆ

ಬೆಂಗಳೂರು: ಉಡುಪಿ ಜಿಲ್ಲೆಯ ಪ್ರಸಿದ್ಧ ಕೊಲ್ಲೂರು ಮೂಕಾಂಬಿಕಾ ದೇವಸ್ಥಾನದ ವ್ಯವಸ್ಥಾಪನಾ ಸಮಿತಿ ಅಧ್ಯಕ್ಷರಾಗಿ ಚಂದ್ರಶೇಖರ ಶೆಟ್ಟಿ ಅವರ ಆಯ್ಕೆ ಮಾಡಿದ್ದನ್ನು ರದ್ದುಪಡಿಸಿ ಹೈಕೋರ್ಟ್ ಏಕ ಸದಸ್ಯ ನ್ಯಾಯಪೀಠ ಹೊರಡಿಸಿದ್ದ ಆದೇಶಕ್ಕೆ ವಿಭಾಗೀಯ ಪೀಠ ಗುರುವಾರ ತಡೆಯಾಜ್ಞೆ ನೀಡಿದೆ. ಏಕ ಸದಸ್ಯ ನ್ಯಾಯಪೀಠದ ಆದೇಶ ಪ್ರಶ್ನಿಸಿ ಚಂದ್ರಶೇಖರ ಶೆಟ್ಟಿ ಮತ್ತು ಸದಸ್ಯ ಗಣೇಶ್ ಕಿಣಿ ಅವರು ಸಲ್ಲಿಸಿದ್ದ ಮೇಲ್ಮನವಿಯ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ರಿತುರಾಜ್ ಅವಸ್ಥಿ ಅವರ ನೇತೃತ್ವದ ವಿಭಾಗೀಯ ಪೀಠ ಈ ಮಧ್ಯಂತರ ಆದೇಶ ಮಾಡಿತು. ದೇವಸ್ಥಾನದ ವ್ಯವಸ್ಥಾಪನಾ ಸಮಿತಿ ಅಧ್ಯಕ್ಷ ಸ್ಥಾನದಲ್ಲಿ ಚಂದ್ರಶೇಖರ ಶೆಟ್ಟಿ ಮತ್ತು ಸದಸ್ಯ ಸ್ಥಾನದಲ್ಲಿ ಗಣೇಶ್ ಕಿಣಿ ಮುಂದುವರೆಯಬಹುದು. ಅವರು ಸಮಿತಿಯ ಸಭೆ ಹಾಗೂ ದೈನಂದಿನ ಚಟುವಟಿಕೆ ನಡೆಸಬಹುದು. ಆದರೆ, ಸಭೆಯಲ್ಲಿ ಕೈಗೊಂಡ ನಿರ್ಧಾರಗಳಿಗೆ ಮತದಾನ ಮಾಡುವಂತಿಲ್ಲ ಎಂದು ನ್ಯಾಯಪೀಠ ಆದೇಶದಲ್ಲಿ ಸ್ಪಷ್ಟಪಡಿಸಿದೆ.

ರಾಷ್ಟ್ರೀಕೃತ ಬ್ಯಾಂಕ್‌ಗಳ ಖಾಸಗೀಕರಣಕ್ಕೆ ವಿರೋಧ

ಸರ್ಕಾರದ ನಡೆಗೆ ಆಕ್ರೋಶ, ಪ್ರತಿಭಟನೆ | ಬೀದಿಗಿಳಿದು ಬ್ಯಾಂಕ್ ಸಿಬ್ಬಂದಿ ಹೋರಾಟ | ಇಂದೂ ಬ್ಯಾಂಕ್ ಬಂದ್

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಲಾಭದಲ್ಲಿರುವ ಸಾರ್ವಜನಿಕ ವಲಯದ ಬ್ಯಾಂಕುಗಳನ್ನು ಖಾಸಗೀಕರಣಕ್ಕೆ ಮುಂದಾಗಿರುವ ಕೇಂದ್ರ ಸರ್ಕಾರದ ಕ್ರಮ ಖಂಡಿಸಿ ಸಾವಿರಾರು ಮಂದಿ ಬ್ಯಾಂಕ್ ಅಧಿಕಾರಿಗಳು ಪ್ರತಿಭಟನೆ ನಡೆಸಿ, ಕೇಂದ್ರ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು.

ಗುರುವಾರ ಬೆಳಗ್ಗೆ ನಗರದ ಮೈಸೂರು ಬ್ಯಾಂಕ್ ವೃತ್ತದಲ್ಲಿ ನಡೆದ ಪ್ರತಿಭಟನೆಯಲ್ಲಿ ಸುಮಾರು ಒಂದು ಸಾವಿರಕ್ಕೂ ಹೆಚ್ಚು ಬ್ಯಾಂಕ್‌ನ ಅಧಿಕಾರಿಗಳು ಮತ್ತು ಸಿಬ್ಬಂದಿ ಭಾಗಿಯಾಗಿದ್ದರು. ಬ್ಯಾಂಕ್‌ಗಳನ್ನು ರಾಷ್ಟ್ರೀಕರಣ ಮಾಡಿರುವುದೇ ರೈತರು ಮತ್ತು ಬಡ ವರ್ಗಕ್ಕೆ ನೆರವಾಗುವುದಕ್ಕಾಗಿ, ಇದೀಗ ಖಾಸಗೀಕರಣ ಮಾಡಿದರೆ ಬಡ ವರ್ಗ ಸಂಕಷ್ಟಕ್ಕೆ ಸಿಗಲಿದೆ. ಆದ್ದರಿಂದ ಯಾವುದೇ ರಾಷ್ಟ್ರೀಕೃತ ಬ್ಯಾಂಕನ್ನು ಖಾಸಗೀಕರಣ ಮಾಡುವುದಕ್ಕೆ ಮುಂದಾಗಬಾರದು ಎಂದು ಆಗ್ರಹಿಸಿದರು.

ಈ ವೇಳೆ ಮಾತನಾಡಿದ ಬ್ಯಾಂಕ್ ಸಂಘಟನೆಗಳ ಸಂಯುಕ್ತ ವೇದಿಕೆ ಸಂಚಾಲಕ ಎಚ್.ವಿ.ವಸಂತ ರೈ, ಸ್ವಾತಂತ್ರ್ಯ ಪೂರ್ವದಲ್ಲಿ ಖಾಸಗಿ ಒಡೆತನದಲ್ಲಿದ್ದ ಬ್ಯಾಂಕ್‌ಗಳಿಂದ ಸಾಮಾನ್ಯ ಜನಕ್ಕೆ ನೆರವಾಗುತ್ತಿರಲಿಲ್ಲ. ಇದೇ ಕಾರಣದಿಂದ ಬಡವರ್ಗದ ಜನರಿಗೆ ನೆರವಾಗುವ ಉದ್ದೇಶದಿಂದ ಬ್ಯಾಂಕುಗಳ ರಾಷ್ಟ್ರೀಕರಣ ಮಾಡಲಾಗಿತ್ತು. ಇದೀಗ ಮತ್ತೆ ಖಾಸಗಿಯವರಿಗೆ ನೀಡಿದರೆ ದೇಶದ ಆರ್ಥಿಕ ವ್ಯವಸ್ಥೆಯ ಮೇಲೆ ದೊಡ್ಡ ಮಟ್ಟದ ತೊಂದರೆಯಾಗುವ ಸಾಧ್ಯತೆಯಿದೆ ಎಂದು ಹೇಳಿದರು.

ಸಾರ್ವಜನಿಕ ವಲಯದ ಬ್ಯಾಂಕುಗಳ ಖಾಸಗೀಕರಣಕ್ಕೆ ಮುಂದಾಗಿರುವ ಕೇಂದ್ರ ಸರ್ಕಾರದ ಕ್ರಮ ಖಂಡಿಸಿ ಸಾವಿರಾರು ಮಂದಿ ಬ್ಯಾಂಕ್ ಅಧಿಕಾರಿಗಳು ಮೈಸೂರು ಬ್ಯಾಂಕ್ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು.

ಬ್ಯಾಂಕ್ ಸಂಘಟನೆಗಳ ಐಕ್ಯವೇದಿಕೆ ರಾಜ್ಯ ಸಂಚಾಲಕ ಶ್ರೀನಿವಾಸ್ ಮಾತನಾಡಿ, ಬ್ಯಾಂಕುಗಳನ್ನು ಖಾಸಗೀಕರಣ ಮಾಡಿದಲ್ಲಿ ರೈತರಿಗೆ, ಸಣ್ಣ ಉದ್ದಿಮೆದಾರರಿಗೆ ಸಾಲ ಸೌಲಭ್ಯಗಳು ಲಭ್ಯವಾಗುವುದಿಲ್ಲ. ಇದರಿಂದ ಪ್ರಸ್ತುತ ಸಂಕಷ್ಟದಲ್ಲಿ ಸಿಲುಕಿರುವ ರೈತವರ್ಗಕ್ಕೆ ತೀವ್ರ ತೊಂದರೆಯಾಗಲಿದೆ. ಬ್ಯಾಂಕುಗಳು ದೇಶದ ಆರ್ಥಿಕತೆಯ ನರನಾಡಿಗಳಂತಿವೆ. ಅಂತಹ ಸಂಸ್ಥೆಗಳನ್ನು ಖಾಸಗಿಯವರ ಕೈಗೆ ಕೊಟ್ಟಲ್ಲಿ ದೇಶದ ಆರ್ಥಿಕತೆಯ ಮೇಲೆ ಪ್ರಭಾವ ಬೀರಲಿದೆ. ಆದ್ದರಿಂದ ಯಾವುದೇ ಕಾರಣಕ್ಕೂ ಬ್ಯಾಂಕುಗಳ ಖಾಸಗೀಕರಣಕ್ಕೆ ಅವಕಾಶ ನೀಡಬಾರದು ಎಂದರು.

ಸಾರ್ವಜನಿಕ ವಲಯದ ಬ್ಯಾಂಕ್‌ಗಳ ಖಾಸಗೀಕರಣ, ಜೀವ ವಿಮಾ ನಿಗಮದಲ್ಲಿನ ಬಂಡವಾಳ ಹಿಂತೆಗೆತ, ವಿಮಾ ಕಂಪನಿಯ ಖಾಸಗೀಕರಣ, ವಿಮಾ ಕ್ಷೇತ್ರದಲ್ಲಿ ಶೇ.74 ವಿದೇಶಿ ಬಂಡವಾಳ ಹೂಡಿಕೆ ಮುಂತಾದ ಕೇಂದ್ರ ಸರ್ಕಾರದ ಕ್ರಮಗಳಿಂದ ಬ್ಯಾಂಕಿಂಗ್ ಮೇಲೆ ಪ್ರತಿಕೂಲ ಪರಿಣಾಮವಾಗಲಿದೆ. ಸರ್ಕಾರ ದೊಡ್ಡ ಸಾಲಗಾರರ ಬಾಕಿ ವಸೂಲಿಗೆ ದಿಟ್ಟ ಪ್ರಯತ್ನ ನಡೆಸುವುದರ ಬದಲಾಗಿ ಬ್ಯಾಂಕ್‌ಗಳನ್ನೇ ಇಂತಹವರಿಗೆ ಮಾರಾಟ ಮಾಡಿ ಸಾರ್ವಜನಿಕ ಆಸ್ತಿಗಳ ಲೂಟಿಗೆ ಅವಕಾಶ ನೀಡುತ್ತಿದೆ. ಬ್ಯಾಂಕ್‌ಗಳ ಖಾಸಗೀಕರಣದಿಂದ ದೇಶದ ಜನರ ಉಳಿತಾಯ ಲೂಟಿ ಆಗಲಿದೆ. ಠೇವಣಿದಾರರ ಹಿತಾಸಕ್ತಿಗೆ ಧಕ್ಕೆ ಆಗಲಿದೆ. ಇದರ ಜೊತೆಗೆ ಉದ್ಯೋಗವಕಾಶ ಮತ್ತು ಮೀಸಲಾತಿಯ ಅವಕಾಶ ಕಡಿಮೆ ಆಗಲಿದೆ. ಬ್ಯಾಂಕ್‌ಗಳ ಶಾಖೆಗಳು ಕಡಿಮೆ ಆಗಲಿದ್ದು ಇದರಿಂದ ಜನಸಾಮಾನ್ಯರು ಬ್ಯಾಂಕಿಂಗ್ ಸೇವೆಗಳಿಂದ ವಂಚಿತರಾಗಲಿದ್ದಾರೆ ಎಂದು ಹೇಳಿದರು.

ಸಾರ್ವಜನಿಕರ ಪರದಾಟ

ಖಾಸಗೀಕರಣ ವಿರೋಧಿಸಿ ರಾಷ್ಟ್ರೀಕೃತ ಬ್ಯಾಂಕ್‌ಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಗುರುವಾರ ನಡೆಸಿದ ಮುಷ್ಕರದಿಂದ ನಗದು ಮೂಲಕ ಬ್ಯಾಂಕಿಂಗ್ ವ್ಯವಹಾರ ನಡೆಸುವ ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸಿದರು. ಶುಕ್ರವಾರ ಸಹ ಬ್ಯಾಂಕ್‌ಗಳು ಬಂದ್ ಘೋಷಿಸಿವೆ.

ಹಲವು ಶಾಲಾ-ಕಾಲೇಜುಗಳಲ್ಲಿ ಪರೀಕ್ಷೆ ಸೇರಿದಂತೆ ವಿವಿಧ ಶುಲ್ಕಗಳನ್ನು ಬ್ಯಾಂಕ್ ಮೂಲಕವೇ ಪಾವತಿ ಮಾಡಬೇಕು ಎಂಬ ಷರತ್ತುಗಳಿದ್ದು, ಶುಲ್ಕ ಪಾವತಿ ಮಾಡಲಾಗದೆ ಹಲವು ವಿದ್ಯಾರ್ಥಿಗಳು ತೊಂದರೆ ಅನುಭವಿಸಿದರು. ಅಲ್ಲದೆ, ಡಿಡಿ ಮತ್ತು ಚಲನ್‌ಗಳ ಮೂಲಕ ವ್ಯವಹಾರ ನಡೆಸುವವರಿಗೂ ಅಡ್ಡಿಯಾಯಿತು. ಇದರಿಂದ ಲಕ್ಷಾಂತರ ರು. ವಹಿವಾಟಿಕೆ ಅಡಚಣೆ ಉಂಟಾಗಿದೆ.

ಜೊತೆಗೆ, ಪ್ರತಿ ದಿನ ಬ್ಯಾಂಕ್‌ಗಳಿಂದ ಸಾಲ ಪಡೆದು ಸಂಜೆ ಬ್ಯಾಂಕ್‌ಗೆ ಜಮಾಯಿಸುವ ಬೀದಿ ಬದಿಯ ವ್ಯಾಪಾರಿಗಳು ಮತ್ತು ಸಣ್ಣ ವ್ಯಾಪಾರಸ್ಥರು, ವ್ಯವಹಾರವಿಲ್ಲದೆ ದಿನ ಕಳೆಯುವಂತಾಗಿತ್ತು. ಆನ್ಲೈನ್ ವ್ಯವಹಾರದ ಅರಿವಿಲ್ಲದ ಜನತೆ ತಮ್ಮ ವ್ಯವಹಾರಗಳನ್ನು ನಡೆಸಲಾಗದೆ ಪರದಾಡಿದರು. ಆದರೆ, ಎಟಿಎಂಗಳು, ಮತ್ತು ಆನ್ಲೈನ್ ಹಣ ಸಂದಾಯ ಪ್ರಕ್ರಿಯೆ ಎಂದಿನಂತೆ ನಡೆದಿದ್ದು, ಜನರಿಗೆ ತೊಂದರೆಯಾಗಲಿಲ್ಲ.

ಬಿಇಎಲ್ ಜತೆ ಎಚ್‌ಎಎಲ್ ತೇಜಸ್ ಒಪ್ಪಂದ

ಯುದ್ಧ ವಿಮಾನಕ್ಕೆ 20 ವ್ಯವಸ್ಥೆ ಪೂರೈಕೆ | ₹2400 ಕೋಟಿ ಡೀಲ್: ಎಚ್‌ಎಎಲ್‌ನ ದೊಡ್ಡ ಸ್ವದೇಶಿ ಒಪ್ಪಂದ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್ (ಎಚ್‌ಎಎಲ್) ಮತ್ತು ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್ (ಬಿಇಎಲ್)ಗಳ ನಡುವೆ ತೇಜಸ್ ಎಂಕೆ 1ಎ ಲಘು ಯುದ್ಧವಿಮಾನಕ್ಕೆ 20 ರೀತಿಯ ವೈಮಾನಿಕ ವ್ಯವಸ್ಥೆಗಳನ್ನು ಅಭಿವೃದ್ಧಿಗೊಳಿಸಿ ಮತ್ತು ಪೂರೈಸುವ ಕುರಿತು ಗುರುವಾರ 2,400 ಕೋಟಿ ರು.ಗಳ ಒಪ್ಪಂದವೇರ್ಪಟ್ಟಿದೆ.

ಎಚ್‌ಎಎಲ್ ಭಾರತದ ಕಂಪನಿಯೊಂದರ ಜೊತೆಗೆ ಈವರೆಗೆ ನಡೆಸಿದ ಅತಿ ದೊಡ್ಡ ಮೊತ್ತದ ಒಪ್ಪಂದ ಇದಾಗಿದೆ. ಆತ್ಮನಿರ್ಭರ ಅಭಿಯಾನದ ಭಾಗವಾಗಿ ಈ ಒಪ್ಪಂದ ಮಾಡಿಕೊಳ್ಳಲಾಗಿದೆ ಎಂದು ಎಚ್‌ಎಎಲ್ ಹೇಳಿದೆ.

2023ರಿಂದ 2028ರವರೆಗಿನ ಐದು ವರ್ಷಗಳ ಒಪ್ಪಂದದಲ್ಲಿ ವೈಮಾನಿಕ ಉಪಕರಣಗಳಾದ ಲೈನ್ ರಿಪ್ಲೇಸಬಲ್ ಯುನಿಟ್, ಫ್ಲೈಟ್ ಕಂಟ್ರೋಲ್ ಕಂಪ್ಯೂಟರ್‌ಗಳು ಮತ್ತು ರಾತ್ರಿ ಹಾರುವ ಎಲ್‌ಆರ್ ಯುಗಳ ಪೂರೈಕೆಯನ್ನು ಒಳಗೊಂಡಿದೆ.

ತೇಜಸ್ ಲಘು ಯುದ್ಧ ವಿಮಾನ ಯೋಜನೆಯು ಎಚ್‌ಎಎಲ್, ಡಿಆರ್‌ಡಿಒ ಮತ್ತು ಬಿಇಎಲ್‌ನಂತಹ ಭಾರತೀಯ ರಕ್ಷಣಾ ಸಂಸ್ಥೆಗಳ ನಡುವಿನ ಹೊಂದಾಣಿಕೆಗೆ ಅತ್ಯುತ್ತಮ ಉದಾಹರಣೆಯಾಗಿದೆ ಎಂದು ಎಚ್‌ಎಎಲ್ ತನ್ನ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.

ದೇಸಿ ಕಂಪನಿ ಜತೆ ಎಚ್‌ಎಎಲ್ ದೊಡ್ಡ ಮೊತ್ತದ ಒಪ್ಪಂದ

2023-24ರಿಂದ ಭಾರತೀಯ ವಾಯುಪಡೆಗೆ ಸ್ವದೇಶಿ ನಿರ್ಮಿತ 83 ತೇಜಸ್ ಎಂಕೆ 1ಎ ಲಘು ಯುದ್ಧ ವಿಮಾನಗಳ ಹಸ್ತಾಂತರ ಪ್ರಕ್ರಿಯೆ ಆರಂಭವಾಗುತ್ತದೆ. ದೇಶಿಯ ಫ್ಲೈಟ್ ಕಂಟ್ರೋಲ್ ಕಂಪ್ಯೂಟರ್‌ಗಳು, ಏರ್ ಡೇಟಾ ಕಂಪ್ಯೂಟರ್‌ಗಳನ್ನು ಹೊಂದಿರಲಿದೆ.

ಇವುಗಳನ್ನು ಬಿಇಎಲ್ ಪೂರೈಸಲಿದೆ. ಈ ವ್ಯವಸ್ಥೆಗಳನ್ನು ಡಿಆರ್‌ಡಿಒ ಮತ್ತು ಬೆಂಗಳೂರಿನ ಏರೋನಾಟಿಕಲ್ ಡೆವಲಪ್‌ಮೆಂಟ್ ಏಜೆನ್ಸಿಯ ವಿವಿಧ ಲ್ಯಾಬ್‌ಗಳಲ್ಲಿ ವಿನ್ಯಾಸ ಮತ್ತು ಅಭಿವೃದ್ಧಿಪಡಿಸಲಾಗಿದೆ. 83 ತೇಜಸ್ ಎಂಕೆ1ಎ ಲಘು ಯುದ್ಧ ವಿಮಾನಗಳಿಗೆ ಈ ವ್ಯವಸ್ಥೆಗಳನ್ನು ಪೂರೈಸಲು ಬಿಇಎಲ್ ತನ್ನ ಬೆಂಗಳೂರು ಮತ್ತು ಹರಿಯಾಣದ ಪಂಚಕುಲಾ ವಿಭಾಗಗಳಲ್ಲಿ ಕಾರ್ಯನಿರ್ವಹಿಸಲಿದೆ. ಎಲ್ಲ ಉಪಕರಣಗಳು ಬಿಇಎಲ್‌ನಿಂದ ಸಿದ್ಧ ಸ್ಥಿತಿಯಲ್ಲಿರುವಂತೆ ಎಚ್‌ಎಎಲ್‌ಗೆ ವರ್ಗಾಯಿಸಬೇಕು ಎಂದು ಎಚ್‌ಎಎಲ್ ತನ್ನ ಹೇಳಿಕೆಯಲ್ಲಿ ತಿಳಿಸಿದೆ. ಪ್ರತಿಷ್ಠಿತ ಲಘು ಯುದ್ಧ ವಿಮಾನ ತೇಜಸ್ ಯೋಜನೆಗಾಗಿ ಎಚ್‌ಎಎಲ್ ಜೊತೆ ಒಪ್ಪಂದ ಮಾಡಿಕೊಂಡಿರುವುದಕ್ಕೆ ನಾವು ಸಂತಸಪಡುತ್ತೇವೆ. ಎಚ್‌ಎಎಲ್‌ನೊಂದಿಗೆ ಬಲವಾದ ಪಾಲುದಾರಿಕೆ ಮತ್ತು ಜಂಟಿ ಯಶಸ್ಸನ್ನು ಮುಂದುವರಿಸಲು ಎದುರು ನೋಡುತ್ತಿದ್ದೇವೆ ಎಂದು ಬಿಇಎಲ್‌ನ ಸಿಎಂಡಿ ಆನಂದಿ ರಾಮಲಿಂಗಂ ಹೇಳಿದ್ದಾರೆ.

ಶಿಕ್ಷಕರಿಗೆ ತರಬೇತಿ ನಂತರ ರಾಷ್ಟ್ರೀಯ ಶಿಕ್ಷಣ ನೀತಿ ಜಾರಿ

ಶಾಲೆ, ಪಿಯು ಕಾಲೇಜಲ್ಲಿ ಎನ್‌ಇಪಿ ಬಗ್ಗೆ ಶಿಕ್ಷಣ ಸಚಿವರ ಸ್ಪಷ್ಟನೆ

• **ಕನ್ನಡಪ್ರಭ ವಾರ್ತೆ** ವಿಧಾನಸಭೆ

ಪ್ರಾಥಮಿಕ, ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಶಿಕ್ಷಕರಿಗೆ ಸೂಕ್ತ ತರಬೇತಿ ನೀಡಿದ ಬಳಿಕ ಹಂತ ಹಂತವಾಗಿ ಜಾರಿ ಮಾಡಲಾಗುವುದು ಎಂದು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಬಿ.ಸಿ.ನಾಗೇಶ್ ಹೇಳಿದ್ದಾರೆ.

ಪ್ರಶ್ನೋತ್ತರ ಅವಧಿಯಲ್ಲಿ ವಿಷಯ ಪ್ರಸ್ತಾಪಿಸಿದ ಕಾಂಗ್ರೆಸ್ ಸದಸ್ಯ ಕೌಜಲಗಿ ಮಹಾಂತೇಶ್ ಶಿವಾನಂದ್, ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಜಾರಿ ಮಾಡಲು ಹೊರಟಿದ್ದೀರಿ. ಆದರೆ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ 53,700 ಶಿಕ್ಷಕರ ಹುದ್ದೆಗಳು ಖಾಲಿ ಇವೆ. ಅಲ್ಲದೆ ಶಿಕ್ಷಕರಿಗೆ ಸೂಕ್ತ ತರಬೇತಿ ನೀಡಿಲ್ಲ. ಈ ಹಂತದಲ್ಲಿ ಏಕಾಏಕಿ ಹೊಸ ನೀತಿ ಅನುಷ್ಠಾನಗೊಳಿಸಿದರೆ ತೀವ್ರ ಸಮಸ್ಯೆ ಎದುರಾಗಲಿದೆ ಎಂದು ಹೇಳಿದರು.

ಇದಕ್ಕೆ ಬಿ.ಸಿ. ನಾಗೇಶ್, ನಾವು ಏಕಾಏಕಿ ರಾಷ್ಟ್ರೀಯ ಶಿಕ್ಷಣ ನೀತಿ ಅನುಷ್ಠಾನ ಮಾಡಲ್ಲ. ಕಾರ್ಯಪಡೆ ಶಿಫಾರಸಿನಂತೆ ಹಂತ-ಹಂತವಾಗಿ ಜಾರಿಗೊಳಿಸಲಾಗುವುದು ಎಂದರು.

ಪ್ರಾಥಮಿಕ ಶಾಲೆಯಲ್ಲಿ 41,869 ಹುದ್ದೆ, ಸರ್ಕಾರಿ ಪ್ರೌಢ ಶಾಲೆಗಳಲ್ಲಿ 8,292 ಹುದ್ದೆ, ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ 3,539 ಹುದ್ದೆ ಖಾಲಿ ಇದೆ. ಹೀಗಾಗಿ ಪ್ರಾಥಮಿಕ ಶಾಲೆಗಳಲ್ಲಿ 18 ಸಾವಿರ ಅತಿಥಿ ಶಿಕ್ಷಕರನ್ನು ಹಾಗೂ ಪ್ರೌಢ ಶಾಲೆಗಳಲ್ಲಿ 5078 ಅತಿಥಿ ಶಿಕ್ಷಕರನ್ನು ತಾತ್ಕಾಲಿಕವಾಗಿ ನೇಮಕ ಮಾಡಿಕೊಳ್ಳಲು ಸಂಬಂಧಪಟ್ಟ ಜಿಲ್ಲೆಗಳಿಗೆ ಅವಕಾಶ ಕಲ್ಪಿಸಲಾಗಿದೆ. ಅಲ್ಲದೆ ರಾಜ್ಯದ ಶಿಕ್ಷಣ ಕ್ಷೇತ್ರದ ಸ್ಥಿತಿಗತಿ ಬಗ್ಗೆ ವರದಿ ನೀಡುವಂತೆ ರಚಿಸಿರುವ ಸಮಿತಿಯ ವರದಿ ಬಂದ ಬಳಿಕ ಪಠ್ಯಕ್ರಮ ಹಾಗೂ ಪಠ್ಯಸೂಚಿ ರಚಿಸಲಾಗುವುದು ಎಂದು ಸ್ಪಷ್ಟಪಡಿಸಿದರು.

ವೈದ್ಯ ಸೇವೆಗೆ ನಮ್ಮ ದೇಶ ಮೊದಲ ಆದ್ಯತೆಯಾಗಲಿ: ಡಾ.ಪ್ರಕಾಶ್‌ನಾಥ

ಕೆಂಗೇರಿಯ ಬಿಜಿಎಸ್ ನರ್ಸಿಂಗ್ ಕಾಲೇಜಿನ 'ಘಟಿಕೋತ್ಸವ' ಗುರುವಾರ ನಡೆಯಿತು.

• **ಕನ್ನಡಪ್ರಭ ವಾರ್ತೆ** ಕೆಂಗೇರಿ

ಕೊರೋನಾ ಸಂಕಷ್ಟ ಕಾಲದಲ್ಲಿ ವೈದ್ಯಕೀಯ ವಿದ್ಯಾರ್ಥಿಗಳು ತಮ್ಮ ಸೇವೆ ಸಲ್ಲಿಸಲು ಭಾರತ ಆದ್ಯತೆಯ ದೇಶವಾಗಬೇಕು. ನಂತರ ಹೊರ ದೇಶಗಳಲ್ಲಿ ಸೇವೆ ಸಲ್ಲಿಸಬಹುದು ಎಂದು ಬಿಜಿಎಸ್ ಸಮೂಹ ಸಂಸ್ಥೆ ವ್ಯವಸ್ಥಾಪಕ ನಿರ್ದೇಶಕ ಡಾ.ಪ್ರಕಾಶ್‌ನಾಥ ಸ್ವಾಮೀಜಿ ಸಲಹೆ ನೀಡಿದರು. ಕೆಂಗೇರಿಯ ಬಿಜಿಎಸ್ ನರ್ಸಿಂಗ್ ಕಾಲೇಜ್‌ನಲ್ಲಿ ಗುರುವಾರ ಏರ್ಪಡಿಸಿದ್ದ 'ಘಟಿಕೋತ್ಸವ ಹಾಗೂ ನೂತನ ತರಗತಿಗಳ ಕಾರ್ಯಾರಂಭ'ಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಅಗತ್ಯ ಸಮಯದಲ್ಲಿ ಪ್ರಥಮ ವೈದ್ಯಕೀಯ ಚಿಕಿತ್ಸೆ ದೊರೆತರೆ ಮಾತ್ರ ಜೀವ ಉಳಿಸಲು ಸಾಧ್ಯವಾಗುತ್ತದೆ. ಅಂತಹ ಶ್ರೇಷ್ಠ ಸೇವೆ ನಿಮ್ಮದು ಎಂದು ನರ್ಸಿಂಗ್ ವಿದ್ಯಾರ್ಥಿಗಳ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು. ಜತೆಗೆ ನರ್ಸಿಂಗ್ ವಿಭಾಗದ ಅತ್ಯುತ್ತಮ ವಿದ್ಯಾರ್ಥಿನಿಯಾದ ಸ್ಮೃತಿ ಅವರಿಗೆ 1 ಲಕ್ಷ ರು. ಪ್ರೋತ್ಸಾಹ ಧನ ನೀಡುವುದಾಗಿ ಘೋಷಿಸಿದರು. ಪ್ರಾಂಶುಪಾಲ ಎನ್.ವಿ.ಮೋಹನ್, ಕಾಲೇಜಿನ ಮುಖ್ಯಸ್ಥರಾದ ಪ್ರೊ.ರುಬಿನ್ ಮಾತನಾಡಿದರು. ಮೆಡಿಕಲ್ ಸೂಪರಿಂಟೆಂಡೆಂಟ್ ಡಾ. ಶ್ರೀಕಾಂತ್, ಪ್ರೊ.ಜಿ.ಜಿ ಥಾಮಸ್, ಎಸ್‌ಜೆಬಿ ಐಟಿ ಕಾಲೇಜು ಪ್ರಾಂಶುಪಾಲ ಅಜಯ್ ಚ